ಪುನರುತ್ಥಾನ ದಿನದಂದು ಸತ್ಯವಿಶ್ವಾಸಿಯನ್ನು ಅವನ ಪರಿಪಾಲಕನ (ಅಲ್ಲಾಹನ) ಹತ್ತಿರಕ್ಕೆ ತರಲಾಗುವುದು. ಆಗ ಅವನು ಆತನ ಮೇಲೆ ತನ್ನ ಪರದೆಯನ್ನು ಹಾಕುವನು. ನಂತರ ಆತ ತನ್ನ ಪಾಪಗಳನ್ನು ಒಪ್ಪಿಕೊಳ್ಳುವಂತೆ ಮಾಡುವನು

ಸಫ್ವಾನ್ ಬಿನ್ ಮುಹ್ರಿಝ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು ಹೇಳಿದರು: ಒಬ್ಬ ವ್ಯಕ್ತಿ ಇಬ್ನ್ ಉಮರ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರೊಡನೆ ಕೇಳಿದರು: "ರಹಸ್ಯ ಸಂಭಾಷಣೆಯ ಬಗ್ಗೆ ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಏನು ಹೇಳುವುದನ್ನು ನೀವು ಕೇಳಿದ್ದೀರಿ?" ಅವರು ಉತ್ತರಿಸಿದರು: "ಅವರು ಹೀಗೆ ಹೇಳುವುದನ್ನು ನಾನು ಕೇಳಿದ್ದೇನೆ: "ಪುನರುತ್ಥಾನ ದಿನದಂದು ಸತ್ಯವಿಶ್ವಾಸಿಯನ್ನು ಅವನ ಪರಿಪಾಲಕನ (ಅಲ್ಲಾಹನ) ಹತ್ತಿರಕ್ಕೆ ತರಲಾಗುವುದು. ಆಗ ಅವನು ಆತನ ಮೇಲೆ ತನ್ನ ಪರದೆಯನ್ನು ಹಾಕುವನು. ನಂತರ ಆತ ತನ್ನ ಪಾಪಗಳನ್ನು ಒಪ್ಪಿಕೊಳ್ಳುವಂತೆ ಮಾಡುವನು. ನಂತರ ಅಲ್ಲಾಹು ಹೇಳುವನು: "ನೀನು (ನಿನ್ನ ಪಾಪಗಳನ್ನು) ಗುರುತಿಸುತ್ತೀಯಾ?" ಆತ ಉತ್ತರಿಸುವನು: "ಹೌದು, ನನ್ನ ಪರಿಪಾಲಕನೇ ನಾನು ಗುರುತಿಸುತ್ತೇನೆ." ಅಲ್ಲಾಹು ಹೇಳುವನು: "ಇಹಲೋಕದಲ್ಲಿ ನಾನು ಈ
ಪಾಪಗಳನ್ನು ಯಾರಿಗೂ ತಿಳಿಯದಂತೆ ಮುಚ್ಚಿಟ್ಟಿದ್ದೆ. ಮತ್ತು ಇಂದು ನಾನು ನಿನಗೆ ಅದನ್ನು ಕ್ಷಮಿಸುತ್ತೇನೆ." ನಂತರ ಅವನ ಪುಣ್ಯಗಳ ಪುಸ್ತಕವನ್ನು ಅವನಿಗೆ ನೀಡಲಾಗುವುದು. ಆದರೆ ಸತ್ಯನಿಷೇಧಿಗಳು ಮತ್ತು ಕಪಟವಿಶ್ವಾಸಿಗಳ ಬಗ್ಗೆ ಹೇಳುವುದಾದರೆ, ಅವರನ್ನು ಸೃಷ್ಟಿಗಳೆಲ್ಲರ ಮುಂದೆ ಕರೆದು ಘೋಷಿಸಲಾಗುವುದು: "ಇವರೇ ಅಲ್ಲಾಹನ ಹೆಸರಲ್ಲಿ ಸುಳ್ಳು ಹೇಳಿದವರು."
[صحيح] [متفق عليه]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ಪುನರುತ್ಥಾನ ದಿನದಂದು ಅಲ್ಲಾಹು ತನ್ನ ದಾಸನೊಂದಿಗೆ ನಡೆಸುವ ರಹಸ್ಯ ಸಂಭಾಷಣೆಯ ಬಗ್ಗೆ ತಿಳಿಸುತ್ತಾ ಹೇಳುತ್ತಾರೆ: ಪುನರುತ್ಥಾನ ದಿನದಂದು ಸತ್ಯವಿಶ್ವಾಸಿಯನ್ನು ಅವನ ಪರಿಪಾಲಕನ (ಅಲ್ಲಾಹನ) ಹತ್ತಿರಕ್ಕೆ ತರಲಾಗುವುದು. ಆಗ ಅಲ್ಲಾಹು ಅಲ್ಲಿ ನೆರೆದ ಜನರ ಕಣ್ಣುಗಳಿಂದ ಅವನನ್ನು ಮುಚ್ಚಿಡಲು ಮತ್ತು ಅವನ ರಹಸ್ಯವನ್ನು ಯಾರೂ ತಿಳಿಯದಿರಲು ತನ್ನ ಪರದೆಯನ್ನು ಅವನ ಮೇಲೆ ಹಾಕುವನು. ನಂತರ ಅವನೊಡನೆ ಕೇಳುವನು: "ಇಂತಿಂತಹ ಪಾಪದ ಬಗ್ಗೆ ನಿನಗೆ ತಿಳಿದಿದೆಯೇ... ದಾಸ ಮತ್ತು ಅಲ್ಲಾಹನಿಗೆ ಸಂಬಂಧಿಸಿದ ಪಾಪಗಳನ್ನು ಅವನು ಒಪ್ಪಿಕೊಳ್ಳುವಂತೆ ಮಾಡುವನು. ಆತ ಉತ್ತರಿಸುವನು: ಹೌದು, ನನ್ನ ಪರಿಪಾಲಕನೇ. ಸತ್ಯವಿಶ್ವಾಸಿಯು ಗಾಬರಿಗೊಂಡು ಭಯಭೀತನಾದಾಗ, ಅಲ್ಲಾಹು ಹೇಳುವನು: ನಾನು ಈ ಪಾಪಗಳನ್ನು ನಿನಗಾಗಿ ಇಹಲೋಕದಲ್ಲಿ ಮುಚ್ಚಿಟ್ಟಿದ್ದೆ. ಇಂದು ನಾನು ನಿನಗೆ ಅವುಗಳನ್ನು ಕ್ಷಮಿಸುತ್ತೇನೆ. ನಂತರ ಅವನ ಪುಣ್ಯಗಳ ಪುಸ್ತಕವನ್ನು ಅವನಿಗೆ ನೀಡಲಾಗುವುದು. ಆದರೆ ಸತ್ಯನಿಷೇಧಿಗಳು ಮತ್ತು ಕಪಟವಿಶ್ವಾಸಿಗಳ ಬಗ್ಗೆ ಹೇಳುವುದಾದರೆ, ಅವರನ್ನು ಅಲ್ಲಿ ನೆರೆದವರೆಲ್ಲರ ಮುಂದೆ ಕೂಗಿ ಕರೆದು ಘೋಷಿಸಲಾಗುವುದು: ಇವರೇ ತಮ್ಮ ಪರಿಪಾಲಕನ ಹೆಸರಲ್ಲಿ ಸುಳ್ಳು ಹೇಳಿದವರು. ತಿಳಿಯಿರಿ! ಅಕ್ರಮಿಗಳ ಮೇಲೆ ಅಲ್ಲಾಹನ ಶಾಪವಿರಲಿ.

http://www.sunnah.global/hadeeth/kn/show/4242